ಗೋಕಾಕ್ ತಾಲ್ಲೂಕಿನಲ್ಲಿ ಪರಿಶಿಷ್ಟ ವರ್ಗದವರ ಆಶ್ರಮ ಶಾಲೆಯನ್ನು ಪ್ರಾರಂಭಿಸುವ ಕುರಿತು.

೬೨೬. ಶ್ರೀ ಎಂ. ಎಲ್. ಮುತ್ತಣ್ಣವರ್ (ಗೋಕಾಕ್).—ಮಾನ್ಯ ಸಮಾಜ ಕಲ್ಯಾಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

(ಅ) ಗೋಕಾಕ್ ತಾಲ್ಲೂಕಿನಲ್ಲಿ ಪರಿಶಿಷ್ಟ ವರ್ಗದವರ ಆಶ್ರಮ ಶಾಲೆಯನ್ನು ಪ್ರಾರಂಭಿಸದಿರಲು ಕಾರಣಗಳೇನು ?

(ಆ) ಸದರಿ ಶಾಲೆಯನ್ನು ಈಗಲಾದರೂ ಪ್ರಾರಂಭಿಸಲು ಸರಕಾರದವರು ಕ್ರಮವನ್ನು ಕೈಗೊಳ್ಳುವರೇ ?

ಶ್ರೀ ವಿ. ಎಲ್ ಪಾಟೀಲ್ (ಸಮಾಜ ಕಲ್ಯಾಣ ಮಂತ್ರಿಗಳು).—

(ಅ) ಆಯವ್ಯಯದಲ್ಲಿ ಕಡಿಮೆ ಹಣ ಒದಗಿಸಿರುವುದರಿಂದ ಆಶ್ರಮ ಶಾಲೆಗಳನ್ನು ಪ್ರಸಕ್ತ ಸಾಲಿನಲ್ಲಿ ಪ್ರಾರಂಭಿಸುವ ಬಗ್ಗೆ ಅಂತಿಮ ತೀರ್ಮಾನ ತೆಗೆದುಕೊಂಡಿಲ್ಲ.

(ಆ) ಉದ್ಭವಿಸುವುದಿಲ್ಲ.

ಹರಪ್ಪನ ಹಳ್ಳಿ ತಾಲ್ಲೂಕಿನ ದುಗ್ಗಾವತ್ತಿಯ ಏತ ನೀರಾವರಿ.

೧೦೪೨. ಶ್ರೀ ಬಿ. ಹೆಚ್. ಯಂಕಾನಾಯ್ಕ (ಹರಪನಹಳ್ಳಿ).—ಮಾನ್ಯ ಲೋಕೋಪಯೋಗಿ ಜಲಾನಯನ ಪ್ರದೇಶಾಭಿವೃದ್ಧಿ ಹಾಗೂ ನೀರಾವರಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಹರಪನಹಳ್ಳಿ ತಾಲ್ಲೂಕಿನ ದುಗ್ಗಾವತ್ತಿ ಏತ ನೀರಾವರಿ ಯೋಜನೆ ಯಾವ ಹಂತದಲ್ಲಿದೆ. ಮತ್ತು ಸದರೀ ಯೋಜನೆಯನ್ನು ಯಾವಾಗ ಪೂರೈಸಲಾಗುವುದು ?

ಶ್ರೀ ಹೆಚ್. ಡಿ. ದೇವೇಗೌಡರು (ಲೋಕೋಪಯೋಗಿ ಹಾಗೂ ನೀರಾವರಿ ಸಚಿವರು);—

ಅ) ಯೋಜನೆಯು ಪ್ರಗತಿಯಲ್ಲಿದ್ದು, ಮುಕ್ತಾಯ ಹಂತದಲ್ಲಿದೆ. ಇದರ ಕೆಲಸವನ್ನು ಡಿಸೆಂಬರ್ ೧೯೮೫ರ ವೇಳೆಗೆ ಪೂರೈಸಲು ಉದ್ದೇಶಿಸಲಾಗಿದೆ.

ದಡ್ಡಿನಾಗನೂರ ಏತ ನೀರಾವರಿ ಯೋಜನೆ.

೬೧೩. ಶ್ರೀ ಮಲ್ಲಾರಗೌಡ ಎಸ್. ಪಾಟೀಲ್ (ಸಂಕೇಶ್ವರ).—ಮಾನ್ಯ ಲೋಕೋಪಯೋಗಿ, ಜಲಾನಯನ ಪ್ರದೇಶಾಭಿವೃದ್ಧಿ ಹಾಗೂ ನೀರಾವರಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ದಡ್ಡಿನಾಗನೂರು ಹತ್ತಿರ ಪುನರ್‌ನಿವೇಶನ ಕೇಂದ್ರಗಳಿಗಾಗಿ ನಿರ್ಮಾಣಗೊಳ್ಳಬೇಕಾಗಿದ್ದ ನೀರಾವರಿಗಾಗಿ ಮಂಜೂರು ಮಾಡಿದ ಹಣದ ಮೊತ್ತವೆಷ್ಟು ?

ಆ) ದಡ್ಡಿ ನಾಗನೂರು ಯಾತ್ ನೀರಾವರಿ ಯೋಜನೆಯನ್ನು ಪ್ರಾರಂಭಿಸುವ ಬಗ್ಗೆ ಜನರ ಒತ್ತಾಯವಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ?

ಇ) ಈ ಯೋಜನೆಯನ್ನು ತೀವ್ರ ಗತಿಯಿಂದ ಪ್ರಾರಂಭಿಸಲು ಸರ್ಕಾರದವರು ಕೈಗೊಳ್ಳುವ ಕ್ರಮಗಳೇನು ?

ಈ) ಜನರು ವಲಸೆ ಹೋಗುವುದನ್ನು ತಡೆಗಟ್ಟುವ ಸಲುವಾಗಿ ಸರ್ಕಾರದವರು ಕೈಗೊಳ್ಳುವ ಕ್ರಮಗಳೇನು ?